# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **577** |
| ಸದಸ್ಯರ ಹೆಸರು | : | ಶ್ರೀ.ಕೆ.ಎ. ತಿಪ್ಪೇಸ್ವಾಮಿ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 23-12-2022 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ಕೃಷಿ ಸಿಂಚಾಯಿ ಯೋಜನೆ ಅಡಿ ಹನಿ/ತುಂತುರು ನೀರಾವರಿ ಕಾರ್ಯಕ್ರಮವನ್ನು ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಈ ಯೋಜನೆ ರೂಪು-ರೇಷೆಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕೃಷಿ ಇಲಾಖೆಯ ಹನಿ ನೀರಾವರಿ/ತುಂತುರು ನೀರಾವರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯ ರೂಪು-ರೇಷೆಗಳು ಈ ಕೆಳಕಂಡಂತಿವೆ;<br>• ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅನುಷ್ಠಾನಕ್ಕೆ ತೋಟಗಾರಿಕೆ ಇಲಾಖೆಯು ನೋಡಲ್ ಇಲಾಖೆಯಾಗಿದ್ದು, ಸರಬರಾಜುದಾರರ ನೋಂದಣಿ ಮತ್ತು ದರ ನಿಗದಿಯನ್ನು ತೋಟಗಾರಿಕೆ ಇಲಾಖೆಯು ನಿರ್ವಹಿಸುತ್ತಿದೆ.<br>• ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶಕ್ಕೆ ಸೀಮಿತವಾಗಿ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇರುತ್ತದೆ.<br>• ಆದರೆ, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ ಈ ಕೆಳಕಂಡಂತೆ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ.<br>i. ಎಲ್ಲಾ ವರ್ಗದ ರೈತರಿಗೆ 2 ಹೆಕ್ಟೇರ್ ಪ್ರದೇಶದವರೆಗೆ ತುಂತುರು ನೀರಾವರಿಗೆ ಶೇ.90 ರಷ್ಟು ಸಹಾಯಧನ.<br>ii. ಸಣ್ಣ / ಅತಿ ಸಣ್ಣ / ಪ.ಜಾ / ಪ.ಪಂ. ವರ್ಗದ ರೈತರಿಗೆ 2 ಹೆಕ್ಟೇರ್ ಪ್ರದೇಶದವರೆಗೆ ಹನಿ ನೀರಾವರಿಗೆ ಶೇ.90 ರಷ್ಟು ಸಹಾಯಧನ.<br>iii. ಉಳಿದ ಎಲ್ಲಾ ರೈತ ವರ್ಗಕ್ಕೆ 5 ಹೆಕ್ಟೇರ್ ಪ್ರದೇಶದವರೆಗೆ ಶೇ.45 ರಷ್ಟು ಸಹಾಯಧನ.<br>• ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ, ಒಮ್ಮೆ ಸೂಕ್ಷ್ಮ ನೀರಾವರಿ ಸೌಲಭ್ಯ ಪಡೆದ ರೈತರು 7 ವರ್ಷಗಳ ನಂತರ ಮತ್ತೆ ಸೂಕ್ಷ್ಮ ನೀರಾವರಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಆದರೆ, ರಾಜ್ಯದ ಎಲ್ಲಾ ರೈತರಿಗೂ ಸದರಿ ಯೋಜನೆಯ ಸೌಲಭ್ಯ ನೀಡುವ ದೃಷ್ಟಿಯಿಂದ, 7 ವರ್ಷಗಳ ನಂತರ ಸದರಿ ಸೌಲಭ್ಯ ನೀಡುವುದನ್ನು ಕಡಿತಗೊಳಿಸಿ, ಕೇವಲ ಒಂದು ಬಾರಿಗೆ ಮಿತಿಗೊಳಿಸಲಾಗಿದೆ. |

| | | |
|---|---|---|
| ಆ) | ರಾಜ್ಯದಲ್ಲಿ ಕೃಷಿ ಸಿಂಚಾಯಿ ಯೋಜನೆಯನ್ನು ಅನುಷ್ಠಾನಗೊಳಿಸಲು ಗುರುತಿಸಿರುವ ಸಂಸ್ಥೆಗಳು ಯಾವುವು; ಮತ್ತು ಅವುಗಳು ನಿರ್ವಹಿಸುವ ಕಾರ್ಯ ಮತ್ತು ಕರ್ತವ್ಯಗಳು ಯಾವುವು; (ಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ ಕೃಷಿ ಸಿಂಚಾಯಿ ಯೋಜನೆಯನ್ನು ಅನುಷ್ಠಾನಗೊಳಿಸಲು ತೋಟಗಾರಿಕೆ ಇಲಾಖೆಯು ನೋಡಲ್ ಇಲಾಖೆಯಾಗಿರುತ್ತದೆ. ತೋಟಗಾರಿಕೆ ಇಲಾಖೆಯಿಂದ 54 ಸೂಕ್ಷ್ಮ ನೀರಾವರಿ ಘಟಕಗಳ ಉತ್ಪಾದನಾ ಸಂಸ್ಥೆಗಳನ್ನು ನೋಂದಣಿ ಮಾಡಿಕೊಳ್ಳಲಾಗಿರುತ್ತದೆ. ಸದರಿ ನೋಂದಾಯಿತ ಸಂಸ್ಥೆಗಳಿಂದ ಕೃಷಿ ಸಿಂಚಾಯಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಮುಂದುವರೆದು, ನೋಂದಾಯಿತ ಸಂಸ್ಥೆಗಳ ವಿವರವನ್ನು **ಅನುಬಂಧ-1** ರಲ್ಲಿ ಮತ್ತು ಅವುಗಳು ನಿರ್ವಹಿಸುವ ಕಾರ್ಯ ಮತ್ತು ಕರ್ತವ್ಯಗಳ ವಿವರಗಳನ್ನು **ಅನುಬಂಧ-2** ರಲ್ಲಿ ಲಗತ್ತಿಸಲಾಗಿದೆ. |
| ಇ) | ರಾಜ್ಯದಲ್ಲಿ ಹನಿ/ತುಂತುರು ನೀರಾವರಿ ಅಳವಡಿಸಿಕೊಂಡ ಸಾವಿರಾರು ರೈತರಿಗೆ ಇದುವರೆಗೂ ಕೋಟ್ಯಾಂತರ ಸಹಾಯ ಸಬ್ಸಿಡಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ಕಾರ್ಯಾದೇಶ ನೀಡಿ ಹನಿ/ತುಂತುರು ನೀರಾವರಿ ಘಟಕಗಳನ್ನು ಅಳವಡಿಸಿಕೊಂಡ ರೈತರಿಗೆ ಸಹಾಯಧನ ಪಾವತಿಸುವ ಪ್ರಕರಣಗಳು ಬಾಕಿಯಿರುವುದಿಲ್ಲ. |

*ಸಂಖ್ಯೆ: ಕೃ ಇ 100 ಕೃಉಇ 2022*

(ಬಿ.ಸಿ.ಪಾಟೀಲ್)
ಕೃಷಿ ಸಚಿವರು